ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

19

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 - ಸೋಂಕು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 30/9/2020

# ವೆಂಕಯ್ಯ ನಾಯ್ಡುಗೆ ಕೊರೊನಾ ಸೋಂಕು



**ಹೊಸದಿಲ್ಲಿ:** ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರಿಗೆ ಕೊರೊನಾ ಸೋಂಕು ತಗುಲಿರುವುದು ಮಂಗಳವಾರ ದೃಢಪಟ್ಟಿದೆ. ಆದರೆ ಅವರಲ್ಲಿ ಸೋಂಕಿನ ಯಾವುದೇ ಲಕ್ಷಣಗಳು ಮಾತ್ರ ಗೋಚರಿಸಿಲ್ಲ. ಆರೋಗ್ಯ ಸ್ಥಿತಿ ಉತ್ತಮವಾಗಿದ್ದು ಮುನ್ನೆಚ್ಚರಿಕೆಯಾಗಿ ಹೋಮ್ ಕ್ವಾರಂಟೈನ್‌ನಲ್ಲಿರಲು ವೈದ್ಯರು ಸೂಚಿಸಿದ್ದಾರೆ. ಎಂದು ಅವರ ಕಚೇರಿ ಪ್ರಕಟಣೆ ತಿಳಿಸಿದೆ. ನಾಯ್ಡು ಅವರ ಪತ್ನಿ ಉಷಾ ಅವರಿಗೂ ಕೊರೊನಾ ಸೋಂಕಿನ ಪರೀಕ್ಷೆ ಮಾಡಲಾಗಿದ್ದು ಅವರ ವರದಿ ನೆಗೆಟಿವ್ ಇದೆ. ಆದರೂ ಮುಂಜಾಗ್ರತೆಯಾಗಿ ಸೆಲ್ಫ್-ಐಸೋಲೇಷನ್‌ನಲ್ಲಿ ಇರುವಂತೆ ವೈದ್ಯರು ತಿಳಿಸಿದ್ದಾರೆ ಎಂದು ತಿಳಿದುಬಂದಿದೆ. ರಾಜ್ಯಸಭೆ ಸಭಾಪತಿಯೂ ಆಗಿರುವ ನಾಯ್ಡು ಅವರು, ಸೆ.14ರಿಂದ 23ರವರೆಗೆ ನಡೆದ ಸಂಸತ್ ಅಧಿವೇಶನದಲ್ಲಿ ರಾಜ್ಯಸಭೆ ಕಲಾಪದ ಅಧ್ಯಕ್ಷತೆ ವಹಿಸಿದ್ದರು. ರಾಜ್ಯಸಭೆಯ 9 ಸದಸ್ಯರಿಗೆ ಸೋಂಕು ತಗಲಿರುವುದು ತಪಾಸಣೆ ವೇಳೆ ದೃಢಪಟ್ಟಿತ್ತು.